# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 989(1116) |
| ಸದಸ್ಯರ ಹೆಸರು | ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | ~~18.07.2024~~ 25.07.2024 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಪ್ರಸ್ತುತ ಸರ್ಕಾರವು ಎಷ್ಟು ಕೆಎಎಸ್ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮಕೈಗೊಂಡಿದೆ; | ಪ್ರಸ್ತುತ ಸರ್ಕಾರವು 2023-24ನೇ ಸಾಲಿಗೆ ಒಟ್ಟು 384 ಕೆಎಎಸ್ ಗೆಜೆಟೆಡ್ ಪ್ರೊಬೇಷನರಿಸ್ ಹುದ್ದೆಗಳನ್ನು ಭರ್ತಿ ಮಾಡಲು ಪ್ರಸ್ತಾವನೆಯನ್ನು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಕಳುಹಿಸಿದೆ. |
| ಆ | ನಿಗದಿಯಂತೆ ಪ್ರತಿ ವರ್ಷ ಕೆಎಎಸ್ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಯಾಗದಿರುವ ಕಾರಣ ಪ್ರಸ್ತುತ ನೇಮಕಾತಿ ಹಂತದಲ್ಲಿರುವ ಈ ಹುದ್ದೆಗಳ ಸಂಖ್ಯೆಯನ್ನು ಹೆಚ್ಚಿಸಬೇಕೆಂದು ಅಭ್ಯರ್ಥಿಗಳು ಮನವಿ ಸಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?; ಅಭ್ಯರ್ಥಿಗಳ ಮನವಿಯಂತೆ ಇನ್ನೂ ಎಷ್ಟು ಹುದ್ದೆಗಳನ್ನು ಹೆಚ್ಚಿಸಲು ಸರ್ಕಾರವು ಕ್ರಮಕೈಗೊಳ್ಳಲಾಗುವುದು; (ವಿವರ ನೀಡುವುದು). | ಹುದ್ದೆಗಳ ಹೆಚ್ಚಳ ಕುರಿತಂತೆ ಸ್ವೀಕೃತ ಮನವಿಗಳನ್ನು ಪರಿಶೀಲಿಸಿ 2024-25ನೇ ಸಾಲಿಗೆ ಬಿಡುಗಡೆಗೊಳಿಸಬೇಕಾಗಿದ್ದ 109 ಹುದ್ದೆಗಳನ್ನು 2023-24ನೇ ಸಾಲಿಗೆ ಲಭ್ಯವಿದ್ದ 275 ಹುದ್ದೆಗಳೊಂದಿಗೆ ಸೇರ್ಪಡೆಗೊಳಿಸಿ ಒಟ್ಟು 384 ಹುದ್ದೆಗಳ ಭರ್ತಿಗೆ ಪ್ರಸ್ತಾವನೆಯನ್ನು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಕಳುಹಿಸಲಾಗಿದೆ. |
| ಇ | ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಪ್ರಸ್ತುತ ಈ ನೇಮಕಾತಿಗಾಗಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಸಂಖ್ಯೆ ಎಷ್ಟು; | ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಪ್ರಸ್ತುತ ಈ ನೇಮಕಾತಿಗಾಗಿ ಈವರೆವಿಗೆ ಒಟ್ಟು 2,10,541 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿರುತ್ತಾರೆ. |
| ಈ | ಕೆಪಿಎಸ್‌ಸಿಯು ಇದೇ ಆಗಸ್ಟ 25 ರಂದು ಕೆಎಎಸ್ ಪೂರ್ವಭಾವಿ ಪರೀಕ್ಷೆಯನ್ನು ನಿಗಧಿಪಡಿಸಿದ್ದು, ಇದಕ್ಕಿಂತ ಮೊದಲೇ ಬ್ಯಾಂಕಿಂಗ್ ಸಿಬ್ಬಂದಿ ನೇಮಕಾತಿ ಸಂಸ್ಥೆಯು (IBPS) ಬ್ಯಾಂಕ್ ಕ್ಲರಿಕಲ್ ಹುದ್ದೆಗಳಿಗೆ ಪರೀಕ್ಷೆಯು ನಿಗಧಿಯಾಗಿದ್ದು, ಒಂದೇ ದಿನ ಪರೀಕ್ಷೆ ನಿಗಧಿಯಾಗಿರುವುದರಿಂದ ಸಾವಿರಾರು ಅಭ್ಯರ್ಥಿಗಳು ಯಾವುದಾದರು ಒಂದು ಪರೀಕ್ಷೆಯಿಂದ ವಂಚಿತರಾಗುವುದಿಲ್ಲವೇ; | ಆಯೋಗವು ದಿನಾಂಕ:26-02-2024ರಂದು 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ ಒಟ್ಟು 384 ಹುದ್ದೆಗಳಿಗೆ ಅಧಿಸೂಚನೆಯನ್ನು ಹೊರಡಿಸಿ, ದಿನಾಂಕ:05-05-2024 ರಂದು ಪೂರ್ವಭಾವಿ ಪರೀಕ್ಷೆಯನ್ನು ನಡೆಸಲು ದಿನಾಂಕ ನಿಗದಿಪಡಿಸಲಾಗಿತ್ತು. ಆದರೆ ಚುನಾವಣಾ ನೀತಿ ಸಂಹಿತೆ ಜಾರಿಯಾದ್ದರಿಂದ ಸದರಿ ಪರೀಕ್ಷೆಯನ್ನು ಮುಂದೂಡಿ |

| | | |
|---|---|---|
| ಉ | ಒಂದು ಕಡೆ ರಾಜ್ಯದಲ್ಲಿರುವ ಬ್ಯಾಂಕ್ ಗಳಲ್ಲಿ ಹೊರ ರಾಜ್ಯದವರು ಬಂದು ಹುದ್ದೆಗಳನ್ನು ಗಳಿಸಿಕೊಳ್ಳುತ್ತಿರುವುದರಿಂದ ಇಲ್ಲಿನ ಸ್ಥಳೀಯ ನಿರುದ್ಯೋಗಿಗಳಿಗೆ ತೊಡಕುಂಟಾಗುತ್ತಿಲ್ಲವೇ; ಪೂರ್ವಭಾವಿ ಪರೀಕ್ಷೆ ದಿನಾಂಕ ನಿಗದಿಗೆ ಸರ್ಕಾರ ಕೈಗೊಳ್ಳಬಹುದಾದ ನಿಲುವೇನು? | ದಿನಾಂಕ:21-07-2024ರಂದು ನಡೆಸಲು ಮರುನಿಗದಿಪಡಿಸಲಾಗಿತ್ತು.<br><br>ತದನಂತರ, 2017-18ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ನೇಮಕಾತಿ ಪರೀಕ್ಷೆಗೆ ಅರ್ಜಿ ಸಲ್ಲಿಸಿದ್ದ ಎಲ್ಲಾ ಅಭ್ಯರ್ಥಿಗಳಿಗೆ ವಯಸ್ಸಿನ ನಿರ್ಬಂಧವಿಲ್ಲದೆ ಒಂದು ಬಾರಿಗೆ ಸೀಮಿತಗೊಳಿಸಿ ಅರ್ಜಿ ಸಲ್ಲಿಸಲು ಹೆಚ್ಚುವರಿ ವಿಶೇಷ ಅವಕಾಶವನ್ನು ನೀಡಿದ್ದರಿಂದ, 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ನೇಮಕಾತಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಕರ್ನಾಟಕ ಲೋಕಸೇವಾ ಆಯೋಗವು 15 ದಿನಗಳ ಕಾಲಾವಕಾಶವನ್ನು ನೀಡಿದೆ. ಈ ಹಿನ್ನೆಲೆಯಲ್ಲಿ ಸದರಿ ಪೂರ್ವಭಾವಿ ಪರೀಕ್ಷೆಯನ್ನು ದಿನಾಂಕ:25-08-2024ರಂದು ನಡೆಸಲು ಮತ್ತೊಮ್ಮೆ ಮರುನಿಗದಿಪಡಿಸಲಾಗಿರುತ್ತದೆ.<br><br>ಆಯೋಗವು ನಡೆಸುವ ವಿವಿಧ ನೇಮಕಾತಿ ಪರೀಕ್ಷೆಗಳ ಪರೀಕ್ಷಾ ದಿನಾಂಕವನ್ನು ನಿಗದಿಪಡಿಸುವ ಮುನ್ನ ಆಯೋಗದಲ್ಲಿ ಸ್ವೀಕೃತವಾದ ಪ್ರಮುಖ ಕೇಂದ್ರ ಪರೀಕ್ಷಾ ಪ್ರಾಧಿಕಾರಿಗಳಾದ ಕೇಂದ್ರ ಲೋಕಸೇವಾ ಆಯೋಗ (ಯು.ಪಿ.ಎಸ್.ಸಿ.), ಸ್ಟಾಫ್ ಸೆಲೆಕ್ಷನ್ ಕಮಿಷನ್ (ಎಸ್.ಎಸ್.ಸಿ) ಹಾಗೂ ರಾಜ್ಯದ ಪರೀಕ್ಷಾ ಪ್ರಾಧಿಕಾರಿಗಳಾದ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆ.ಇ.ಎ.) ಮತ್ತು ಇನ್ನಿತರೆ ಪ್ರಾಧಿಕಾರಗಳಿಂದ ನಿಗದಿಪಡಿಸಲಾದ ಪರೀಕ್ಷಾ ದಿನಾಂಕಗಳ ಕುರಿತಂತಹ ಮಾಹಿತಿಗಳನ್ನು ಪರಿಶೀಲಿಸಿದ ನಂತರವೇ ಪರೀಕ್ಷಾ ದಿನಾಂಕವನ್ನು ನಿಗದಿಪಡಿಸಲಾಗುವುದು. ಮೇಲ್ಕಂಡ ಪರೀಕ್ಷಾ ಪ್ರಾಧಿಕಾರಗಳಿಂದ ಪರೀಕ್ಷಾ ದಿನಾಂಕಗಳ ಕುರಿತಂತಹ ಮಾಹಿತಿಯು ನಿರಂತರವಾಗಿ ಆಯೋಗದಲ್ಲಿ ಸ್ವೀಕೃತವಾಗುತ್ತದೆ.<br><br>ಅದರಂತೆ ದಿನಾಂಕ:25-08-2024ರಂದು ಸದರಿ ಸಂಸ್ಥೆಗಳಿಂದ ಯಾವುದೇ ಪರೀಕ್ಷೆಗಳು ನಿಗದಿಯಾಗದೇ ಇರುವ ಹಿನ್ನೆಲೆಯಲ್ಲಿ |

ಪೂರ್ವಭಾವಿ ಪರೀಕ್ಷೆಯ ದಿನಾಂಕವನ್ನು ನಿಗದಿಪಡಿಸಲಾಗಿತ್ತು. ಬ್ಯಾಂಕಿಂಗ್ ಪರೀಕ್ಷೆ ಐ.ಬಿ.ಪಿ.ಎಸ್. (ಇನ್‌ಸ್ಟಿಟ್ಯೂಟ್ ಆಫ್ ಬ್ಯಾಂಕಿಂಗ್ ಪರ್ಸೋನೆಲ್ ಸೆಲೆಕ್ಷನ್) ಪರೀಕ್ಷೆ ನಿಗದಿಯಾಗಿರುವ ಕುರಿತು ಆಯೋಗಕ್ಕೆ ಯಾವುದೇ ಮಾಹಿತಿಯು ಲಭ್ಯವಿರಲಿಲ್ಲ. ಈ ಬಗ್ಗೆ ವೆಬ್ ಸೈಟ್ ನಲ್ಲಿ ಪರಿಶೀಲಿಸಲಾಗಿ, ಐಬಿಪಿಎಸ್ ಅಧಿಸೂಚನೆಯು ದಿನಾಂಕ: 01-07-2024ರಂದು ಹೊರಡಿಸಲಾಗಿದ್ದು, ಪೂರ್ವಭಾವಿ ಪರೀಕ್ಷೆಯನ್ನು 2024ರ ಆಗಸ್ಟ್ ತಿಂಗಳಲ್ಲಿ ನಡೆಸಲಾಗುವುದು ಎಂದು ನಮೂದಾಗಿರುತ್ತದೆ. ಆದರೆ ಆಯೋಗದ ಪೂರ್ವಭಾವಿ ಪರೀಕ್ಷೆಯ ವೇಳಾಪಟ್ಟಿಯನ್ನು ದಿನಾಂಕ:27-06-2024ರಂದೇ ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿರುತ್ತದೆ.

ಮುಂದುವರೆದು, ದಿನಾಂಕ:25-08-2024ರಂದು ನಿಗದಿಯಾಗಿರುವ 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಪೂರ್ವಭಾವಿ ಪರೀಕ್ಷೆಗೆ ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಸುಮಾರು 700 ಪರೀಕ್ಷಾ ಉಪಕೇಂದ್ರಗಳಿಂದ ಒಪ್ಪಿಗೆ ಪತ್ರಗಳನ್ನು ಪಡೆಯಲಾಗಿದ್ದು, ಸದರಿ ಉಪಕೇಂದ್ರಗಳ ಯಾವುದೇ ಮುಖ್ಯಸ್ಥರುಗಳು ಸದರಿ ದಿನಾಂಕದಂದು ಐ.ಬಿ.ಪಿ.ಎಸ್. ಪರೀಕ್ಷೆ ಇರುವ ಕಾರಣದಿಂದಾಗಿ ಒಪ್ಪಿಗೆ ಪತ್ರ ನೀಡಲು ನಿರಾಕರಿಸದೆ ಎಲ್ಲರು ಪರೀಕ್ಷೆಯನ್ನು ನಡೆಸಲು ಒಪ್ಪಿಗೆ ಸೂಚಿಸಿರುತ್ತಾರೆ. ಈ ಹಿನ್ನಲೆಯಲ್ಲಿ ಸದರಿ ದಿನಾಂಕದಂದು ಪೂರ್ವಭಾವಿ ಪರೀಕ್ಷೆ ನಡೆಸಲು ಎಲ್ಲಾ ರೀತಿಯ ಪೂರ್ವ ಸಿದ್ಧತೆಗಳನ್ನು ಆಯೋಗವು ಈಗಾಗಲೇ ಮಾಡಿಕೊಂಡಿರುತ್ತದೆ.

ಗೆಜೆಟೆಡ್ ಪ್ರೊಬೇಷನರ್ ನೇಮಕಾತಿ ಪೂರ್ವಭಾವಿ ಪರೀಕ್ಷೆ, ಮುಖ್ಯ ಪರೀಕ್ಷೆ ಮತ್ತು ವ್ಯಕ್ತಿತ್ವ ಪರೀಕ್ಷೆಯನ್ನೊಳಗೊಂಡಂತೆ ಮೂರು ಹಂತಗಳಲ್ಲಿ ಪರೀಕ್ಷೆಯನ್ನು ನಡೆಸಲಾಗುತ್ತದೆ. ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ (ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇಮಕಾತಿ) ನಿಯಮಗಳು,

| | | |
|---|---|---|
| | | 1997ರನ್ವಯ, ಸರ್ಕಾರಿ ಅಧಿಸೂಚನೆ ಸಂಖ್ಯೆ: DPAR 67 SeLoAa 2017, ದಿನಾಂಕ:30.05.2019ರನ್ವಯ ಅಧಿಸೂಚನೆ ಹೊರಡಿಸಿದ ಒಂದು ವರ್ಷದೊಳಗೆ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣ ಗೊಳಿಸಬೇಕಾಗಿರುತ್ತದೆ.<br><br>2023-24ನೇ ಸಾಲಿನ ನೇಮಕಾತಿಯ ಪೂರ್ವಭಾವಿ ಪರೀಕ್ಷೆಯು ಈಗಾಗಲೇ ಎರಡು ಬಾರಿ ಮುಂದೂಡಲ್ಪಟ್ಟಿದ್ದು, ಇದೇ ರೀತಿ ಪದೇ ಪದೇ ಪರೀಕ್ಷಾ ದಿನಾಂಕವನ್ನು ಮುಂದೂಡಿದಲ್ಲಿ ನಿಗದಿತ ಕಾಲಾವಧಿಯೊಳಗೆ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಲು ಕಷ್ಟಸಾಧ್ಯವಾಗುವುದರಿಂದ, ಆಯೋಗವು ಪೂರ್ವಭಾವಿ ಪರೀಕ್ಷೆಯನ್ನು ನಿಗದಿಯಾಗಿರುವ ದಿನಾಂಕದಂದೇ ನಡೆಸಲು ನಿರ್ಧರಿಸಿದೆ. |

ಸಂಖ್ಯೆ: ಸಿಆಸುಇ 108 ಎಸ್‌ಎಸ್‌ಸಿ 2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ